# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ಬಿಬಿಎಂಪಿ/ಯವ/ಕೊಉ/ಪಿಆರ್/03/2020-21

ಸಹಾಯಕ ಅಭಿಯಂತರರ ಕಛೇರಿ
ಕೊಡಿಗೇಹಳ್ಳಿ ಉಪವಿಭಾಗ, ಯಲಹಂಕ ವಲಯ
9ನೇ ಅಡ್ಡರಸ್ತೆ, ಡಿ ಬ್ಲಾಕ್
ಸಹಕಾರನಗರ, ಬೆಂಗಳೂರು 560092
ದಿನಾಂಕ: 06.03.2021

**ದಿನಾಂಕ: 06.03.2021 ರಂದು ವಾರ್ಡ್ ಸಮಿತಿಯ ಸಭೆಯ ನಡವಳಿಗಳು:-**

**ಸಭೆಗೆ ಹಾಜರಿದ್ದವರು:**

- ಶ್ರೀ ಗುರು, ಕಾರ್ಯಪಾಲಕ ಅಭಿಯಂತರರು, ನೋಡೆಲ್ ಅಧಿಕಾರಿಗಳು ಹಾಗೂ ಅಧ್ಯಕ್ಷರು ವಾರ್ಡ್ ಸಮಿತಿ.
- ಶ್ರೀ ಪ್ರವೀಣ್ ಎ.ಆರ್., ಕಿರಿಯ ಅಭಿಯಂತರರು ಹಾಗೂ ವಾರ್ಡ್ ಸಮಿತಿ ಕಾರ್ಯದರ್ಶಿ
- ಶ್ರೀಮತಿ. ಕವಿತಾ, ಕಿರಿಯ ಆರೋಗ್ಯ ಪರಿವೀಕ್ಷಕರು, ಘನ ತ್ಯಾಜ್ಯ
- ಶ್ರೀ. ಮಂಜುನಾಥ್, ಹಿರಿಯ ಆರೋಗ್ಯ ಪರಿವೀಕ್ಷಕರು, ಅರೋಗ್ಯ
- ಶ್ರೀಮತಿ. ಚಿಂತನ, ಸಹಾಯಕ ಅಭಿಯಂತರರು (ಬೆಂಗಳೂರು ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ) (**BWSSB**).
- ಶ್ರೀ ಕೆ.ಎನ್ ಬಾಬುರೆಡ್ಡಿ, ಕಿರಿಯ ಅಭಿಯಂತರರು ವಿದ್ಯುತ್ ವಿಭಾಗ.
- ಶ್ರೀಮತಿ ರಶ್ಮಿ, ತೋಟಗಾರಿಕೆ ಅಧೀಕ್ಷಕರು, ಯಲಹಂಕ ವಲಯ.
- ಶ್ರೀ ವಿಶ್ವನಾಥ್, ಕಂದಾಯ ಪರಿವೀಕ್ಷಕರು.

ವಾರ್ಡ್ ಸಮಿತಿ ಸದಸ್ಯರು

- ಶ್ರೀಮತಿ. ಶಾಂತಕುಮಾರಿ, ಬಾಲಾಜಿ ಬಡಾವಣೆ, ಸದಸ್ಯರು
- ಶ್ರೀ. ಅಂತೋಣಿ ದಾಸ್, ವಸತಿ ಕ್ಷೇಮಾಭಿವೃದ್ಧಿ ಸಂಘದ ಸದಸ್ಯರು
- ಶ್ರೀ ಪ್ರಜ್ವಲ್, ಡಿ ಇನ್‌ಕ್ಲೇವ, ಸದಸ್ಯರು

ವಾರ್ಡ್ ಸಮಿತಿ ಸಭೆಯನ್ನು ವಾರ್ಡ್ ಸಮಿತಿ ಕಾಯದರ್ಶಿಗಳಾದ ಶ್ರೀ. ಪ್ರವೀಣ್ ಎ.ಆರ್. ರವರು ವಾರ್ಡ್ ಸಮಿತಿ ಅಧ್ಯಕ್ಷರು, ವಾರ್ಡ್ ಸಮಿತಿಯ ಸದಸ್ಯರುಗಳು ಹಾಗೂ ಎಲ್ಲಾ ವೃಂದದ ಅಧಿಕಾರಿಗಳನ್ನು ಸ್ವಾಗತಿಸುತ್ತಾ ಸಭೆಯನ್ನು ಪ್ರಾರಂಭಿಸಲಾಯಿತು ಹಾಗೂ ಈ ಹಿಂದಿನ ಸಭೆಯಲ್ಲಿ ಚರ್ಚಿಸಿದ ಸಮಸ್ಯೆಗಳನ್ನು ಪರಿಹರಿಸಲಾಗಿದೆ ಎಂದು ಸಭೆಗೆ ತಿಳಿಸಿದರು.

ಶ್ರೀ ಗುರು, ಕಾ.ಪಾ.ಅ ಹಾಗೂ ನೋಡಲ್ ಅಧಿಕಾರಿ ರವರು ಮಾತನಾಡುತ್ತ ಹಿಂದಿನ ಸಭೆಯ ನಡುವಳಿಗಳ ಬಗ್ಗೆ ಓದಿ ಚರ್ಚಿಸಿ, ಸಮಸ್ಯೆಗಳನ್ನು ಬಗೆಹರಿಸಿರುವ ಕುರಿತು ಹಾಜರಿದ್ದ ಅಧಿಕಾರಿಗಳಿಗೆ

ಮತ್ತು ವಸತಿ ಕ್ಷೇಮಾಭಿವೃದಿ ಸಂಘದ ಸದಸ್ಯರುಗಳ ಜೊತೆಗೆ ಚರ್ಚಿಸಿದರು. ನಂತರ ಹಾಜರಿದ್ದ ಅಧಿಕಾರಿಗಳು ಸಮಸ್ಯೆಗಳನ್ನು ಬಗೆಹರಿಸಿರುವುದಾಗಿ ಸಭೆಗೆ ತಿಳಿಸಿದರು.

ಶ್ರೀಮತಿ. ಶಾಂತಕುಮಾರಿ, ಬಾಲಾಜಿ ಬಡಾವಣೆ, ಸದಸ್ಯರು ಮಾತನಾಡಿ, ಚರಂಡಿಯಲ್ಲಿ ಸಿಲ್ಟ್ ತುಂಬಿರುವುದರಿಂದ ನೀರಿನ ಹರಿವು ಸಾರಾಗವಾಗಿ ಹರಿಯದೆ ಸ್ಥಗಿತವಾಗಿರುತ್ತದೆ. ಇದರಿಂದ ಸಾರ್ವಜನಿಕರಿಗೆ ಬಹಳ ತೊಂದರೆಯನ್ನುಂಟು ಮಾಡುತ್ತಿದೆ ಹಾಗೂ ಬೋರ್‌ವೆಲ್ ಇದ್ದು, ಈಗಾಗಲೇ ಸದರಿ ಬೋರ್‌ವೆಲ್‌ನಲ್ಲಿ ನೀರು ನಿಂತು ಹೋಗಿರುವುದರಿಂದ ಪರ್ಯಾಯ ಬೋರ್‌ವೆಲ್ ಕೊಳವೆಬಾವಿಯನ್ನು ಕೊರೆಯಿಸುವಂತೆ ಸಭೆಯಲ್ಲಿ ಮನವಿ ಮಾಡಿದರು.

ಈ ಕುರಿತು ನೋಡಲ್ ಅಧಿಕಾರಿಗಳು ಮಾತನಾಡಿ ಸಿಲ್ಟ್ ಮತ್ತು ಟ್ರಾಕ್ಟರ್ ಬಿಟ್ಟು ಸಮಸ್ಯೆಯನ್ನು ಬಗೆಹರಿಸಲು ಶ್ರೀ ಪ್ರವೀಣ್ ರವರಿಗೆ ಸೂಚಿಸಿದರು. ನಂತರ ಶ್ರೀ ಪ್ರವೀಣ್, ಕಿರಿಯ ಅಭಿಯಂತರರು ಮಾತನಾಡಿ ಸದರಿ ಸಿಲ್ಟ್ ಮಣ್ಣನ್ನು ತೆಗೆದು ಒಣಗಿದ ನಂತರ ಡಂಪಿಂಗ್ ಯಾರ್ಡ್‌ಗೆ ಸ್ಥಳಾಂತರಿಸಲಾಗುವುದು ಹಾಗೂ ಸದರಿ ಬೋರ್‌ವೆಲ್ ನಿರ್ವಹಣ ಅವಧಿ ಕಾಮಗಾರಿ ಮುಕ್ತಾಯವಾದ ಒಂದು ವರ್ಷವಾಗಿದ್ದು ನಂತರ ಬೋರ್‌ವೆಲ್ ಅನ್ನು ಬೆಂಗಳೂರು ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ರವರಿಗೆ ಹಸ್ತಾಂತರಿಸಲಾಗುವುದು ಎಂದು ಸಭೆಗೆ ತಿಳಿಸಿದರು.

ಶ್ರೀ. ಅಂತೋನಿ ದಾಸ್, ಸಹಾಕಾರನಗರ ವಸತಿ ಕ್ಷೇಮಾಭಿವೃದ್ದಿ ಸಂಘದ ಸದಸ್ಯರು ಮಾತನಾಡಿ ಸಹಕಾರನಗರದಲ್ಲಿ ಸರ್ಕಾರಿ ಜಾಗವು ಒತ್ತುವರಿಯಾಗಿರುವುದು ಕಂಡಿಬಂದಿರುತ್ತದೆ. ಐದು ಉದ್ಯಾನವನಗಳ ಜಾಗಗಳಿಗೆ ಖಾತಾ ಪ್ರಮಾಣ ಪತ್ರ ಮಾಡಿಸಿಕೊಡಿರುತ್ತಾರೆ ಎಂದು ಸಭೆಗೆ ತಿಳಿಸುತ್ತ, ಸಮಸ್ಯೆಯನ್ನು ಬಗ್ಗೆಹರಿಸಲು ಸಭೆಗೆ ಕೋರಿದರು.

ಶ್ರೀ ಪ್ರವೀಣ್ ಎ.ಆರ್., ಕಿರಿಯ ಅಭಿಯಂತರರು ಮಾತನಾಡಿ ಜಂಟಿ ಆಯುಕ್ತರು (ಯಲಹಂಕ ವಲಯ) ರವರಿಂದ ಬಿಡಿಎ ರವರಿಗೆ ಪಾರ್ಕ್‌ಗಳನ್ನು ಗುರುತಿಸಿ ಕೊಡಬೇಕೆಂದು ಪತ್ರ ಬರೆಯಲಾಗಿದ್ದು ಹಾಗೂ ಸದರಿ ಪ್ರಕರಣವು ಉಚ್ಛ ನ್ಯಾಯಲಯದಲ್ಲೆ ದಾವೆ ಇರುವುದಾಗೆ ತಿಳಿಸುತ್ತಾ, ನ್ಯಾಯಾಲಯದ ತಿರ್ಪಿನ ನಂತರ ಸಮಸ್ಯೆ ಬಗೆಹರಿಸಲಾಗುವುದೆಂದು ಸಭೆಗೆ ತಿಳಿಸಿದರು.

ಈ ಕುರಿತು ಶ್ರೀ ಗುರು, ನೋಡೆಲ್ ಅಧಿಕಾರಿಗಳು ಮಾತನಾಡಿ ಸದರಿ ಬಡಾವಣೆಯ ಸಮಸ್ಯೆಯನ್ನು ಶ್ರೀ. ವಿಶ್ವನಾಥ್., ಕಂದಾಯ ಪರಿವಿಕ್ಷಕರು ಹಾಗೂ ಶ್ರೀ ಪ್ರವೀಣ್ ಎ.ಆರ್., ಕಿರಿಯ ಅಭಿಯಂತರರವರಿಗೆ ಒತ್ತುವರಿದಾರರಿಗೆ ಅವಕಾಶ ನೀಡದಂತೆ ಸಾರ್ವಜನಿಕ ಆಸ್ತಿಪಾಸ್ತಿಗಳನ್ನು ರಕ್ಷಿಸಲು ಫೆನ್ಸಿಂಗ್, ಕಾಂಪೌಡ್ ಹಾಗೂ ಸೂಕ್ತ ಕ್ರಮಗಳನ್ನು ಕೈಗೊಳ್ಳಲ ಸೂಚಿಸಿದರು.

ಶ್ರೀಮತಿ. ಶಾಂತಕುಮಾರಿ, ಬಾಲಾಜಿ ಬಡಾವಣೆ ಸದಸ್ಯರು ಮಾತನಾಡಿ ಸದರಿ ಬಡಾವಣೆಯಲ್ಲಿ ಹಳೆಯ ಟ್ರಾನ್ಸಾಮರ್ ಕಡಿಮೆ ಎತ್ತರದಲ್ಲಿರುತ್ತದೆ. ಇದರಿಂದ ಮಕ್ಕಳು ಅದನ್ನು ತಾಕುವ ಬೀತಿ ಇರುವುದರಿಂದ ಹಾಗೂ ಇದರಿಂದ ಸಾರ್ವಜನಿಕರಿಗೆ ತುಂಬ ತೊಂದರೆ ಉಂಟಾಗಿದ್ದು ಸ್ಥಳಾಂತರಿಸಲು ಸಭೆಗೆ ಮನವಿ ಮಾಡಿಕೊಂಡರು.

ಈ ಕುರಿತು ನೋಡೆಲ್ ಅಧಿಕಾರಿಗಳು ಮಾತನಾಡಿ ಮಳೆಯಂತಹ ಸಂದರ್ಭದಲ್ಲಿ ಕಡಿಮೆ ಎತ್ತರದಲ್ಲಿರುವುದರಿಂದ ಅನಾಹುತಗಳು ಸಂಭವಿಸುವ ಅವಕಾಶ ಹೆಚ್ಚಾಗಿರುವುದರಿಂದ

ಸಾರ್ವಜನಿಕರು ಹಾಗೂ ಮಕ್ಕಳಿಗೆ ಅಪಾಯವಾಗುವ ಮುನ್ನವೆ ಎಚ್ಚರವಹಿಸಲು ಹಾಗೂ ಈ ಕೂಡಲೆ ತುರ್ತು ಕ್ರಮ ಕೈಗೊಳ್ಳಲು ಶ್ರೀ. ಗೋವಿಂದರಾಜು, ಅಭಿಯಂತರರು, (BESCOM) ರವರಿಗೆ ಸೂಚಿಸಿದರು.

ಶ್ರೀಮತಿ. ಶಾಂತಕುಮಾರಿ, ಬಾಲಾಜಿ ಬಡಾವಣೆ, ಸದಸ್ಯರು ಮಾತನಾಡಿ, ಸದರಿ ಬಡಾವಣೆ ರಸ್ತೆಯಲ್ಲಿರುವ ಅಂಗಡಿಗಳ ಎದುರು ವಾಹನಗಳನ್ನು ನಿಲ್ಲಿಸುತ್ತಿರುತ್ತಾರೆ. ಅದರಿಂದ ಸಾರ್ವಜನಿಕರಿಗೆ ಓಡಾಡಲು ತುಂಬಾ ಕಷ್ಟಕರವಾಗಿರುತ್ತದೆ ಅದನ್ನು ಸಹ ಸರಿಪಡಿಸಿ ಕೊಡಲು ಕೋರಿದರು.

ಈ ಕುರಿತು ನೋಡಲ್ ಅಧಿಕಾರಿಗಳು ಮಾತನಾಡಿ ಹಿರಿಯ ಆರೋಗ್ಯ ನಿರಿಕ್ಷಕರಿಗೆ ಹಾಗೂ ಶ್ರೀ ಪ್ರವೀಣ್ ಎ. ಆರ್, ಕಿರಿಯ ಅಭಿಯಂತರರಿಗೆ ಜಂಟಿ ಸ್ಥಳ ಪರಿಶೀಲನೆ ಮಾಡಿ ವರದಿಯನ್ನು ನೀಡಲು ಹಾಗೂ ಹಿರಿಯ ಆರೋಗ್ಯ ನಿರಿಕ್ಷಕರಿಗೆ ಸಂಬಂಧಿಸಿದ ಅಂಗಡಿಗಳಿಗೆ ನೋಟಿಸನ್ನು ಜಾರಿ ಮಾಡಲು ಹಾಗೂ ಮುಂದಿನ ಸಭೆಗೆ ಮುನ್ನವೆ ಸದರಿ ಸಮಸ್ಯೆ ಬಗೆಹರಿಸಲು ತಿಳಿಸಿದರು.

ಅಂತಿಮವಾಗಿ ಶ್ರೀ ಗುರು, ನೋಡಲ್ ಅಧಿಕಾರಿಯವರು ಈ ಮೇಲ್ಕಂಡ ಅಂಶಗಳ ಬಗ್ಗೆ ವಿವರವಾಗಿ ಅಧಿಕಾರಿಗಳಿಗೆ ನಿರ್ದೇಶನ ನೀಡಿ, ಸಭೆಯಲ್ಲಿ ಉಪಸ್ಥಿತರಿದ್ದ ಅಧಿಕಾರಿಗಳೊಂದಿಗೆ ಕೂಲಂಕುಶವಾಗಿ ಚರ್ಚಿಸಿದ್ದು, ಸದರಿ ವಿಷಯಗಳ ಬಗ್ಗೆ ಕ್ರಮಕೈಗೊಳ್ಳಲು ಸೂಚಿಸಿದರು ನಂತರ ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯ ಗೊಳಿಸಲಾಯಿತು.

(ಪ್ರವೀಣ್ ಎ.ಆರ್.)
ಕಾರ್ಯದರ್ಶಿಗಳು ಮತ್ತು
ಕಿರಿಯ ಅಭಿಯಂತರರು
ವಾರ್ಡ್ 8, ಕೊಡಿಗೇಹಳ್ಳಿ ಉಪ ವಿಭಾಗ

(ಶ್ರೀ ಗುರು)
ಕಾರ್ಯಪಾಲಕ ಅಭಿಯಂತರರು ಹಾಗೂ
ವಾರ್ಡ್ ಸಮಿತಿ ಅಧ್ಯಕ್ಷರು
ವಾರ್ಡ್ ಸಂಖ್ಯೆ:08

<u>ಪ್ರತಿಯನ್ನು:-</u>

1. ಮಾನ್ಯ ಆಡಳಿತ ಅಧಿಕಾರಿಗಳು, ಬಿಬಿಎಂಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
2. ಮಾನ್ಯ ಆಯುಕ್ತರು, ಬಿಬಿಎಂಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
3. ಮಾನ್ಯ ಜಂಟಿ ಆಯುಕ್ತರು, ಯಲಹಂಕ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
4. ಆರೋಗ್ಯಾಧಿಕಾರಿಗಳು, ಯಲಹಂಕ ವಲಯ, ಬಿಬಿಎಂಪಿ ರವರ ಮಾಹಿತಿಗಾಗಿ ಕಳುಹಿಸಿದೆ.
5. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೃಹತ್ ನೀರುಗಾಲುವೆ ರವರ ಮಾಹಿತಿಗಾಗಿ ಕಳುಹಿಸಿದೆ.
6. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ ರವರಿಗೆ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
7. ಸಹಾಯಕ ಕಾರ್ಯಪಾಲಕ ಅಭಿಯಂತರರು, ಕೊಡಿಗೇಹಳ್ಳಿ ಉಪವಿಭಾಗ, ಬಿಬಿಎಂಪಿ ರವರ ಮಾಹಿತಿಗಾಗಿ ಕಳುಹಿಸಿದೆ.
8. ಸಹಾಯಕ ಕಾರ್ಯಪಾಲಕ ಅಭಿಯಂತರರು, ಘನತ್ಯಾಜ್ಯ ವಿಭಾಗ, ಬಿಬಿಎಂಪಿ ರವರ ಮಾಹಿತಿಗಾಗಿ ಕಳುಹಿಸಿದೆ.
9. ಕಾರ್ಯದರ್ಶಿ ಹಾಗೂ ಸಂಚಾಲಕರು, ವಾರ್ಡ್ ಕಮಿಟಿ ರವರ ಮಾಹಿತಿಗಾಗಿ ಕಳುಹಿಸಿದೆ.
10. ವಾರ್ಡ್ ಕಮಿಟಿ ಸದಸ್ಯರುಗಳ ಮಾಹಿತಿಗಾಗಿ ಕಳುಹಿಸಿದೆ.
11. ಕಛೇರಿ ಕಡತಕ್ಕೆ.